# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ / ಸಹಾಯಕ ಅಭಿಯಂತರರವರ ಕಛೇರಿ, ವೃಷಭಾವತಿನಗರ, ವಾರ್ಡ್ ಸಂಖ್ಯೆ-102, 4ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಬಡಾವಣೆ, ವೃಷಭಾವತಿನಗರ, ಬೆಂಗಳೂರು-560 079.

---

ಸಂಖ್ಯೆ: ಸ.ಅ./ವಾರ್ಡ್-102/ವಾ.ಸ./ಪಿ.ಆರ್/ 32 /2021-22

ದಿನಾಂಕ: 14/01/2022

## ಸಭಾ ಸೂಚನಾ ಪತ್ರ

ವಿಷಯ: ವೃಷಭಾವತಿನಗರ ವಾರ್ಡ್ ಸಂಖ್ಯೆ-102ರ ವಾರ್ಡ್ ಮಟ್ಟದ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.

ಉಲ್ಲೇಖ: ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಪತ್ರ ಸಂಖ್ಯೆ: ಬಿ12(5)/ಪಿ.ಆರ್/35/ 2020-21 ದಿನಾಂಕ: 21.09.2020.

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಮಹಾಲಕ್ಷ್ಮೀಪುರಂ ವಿಭಾಗ, ನಾಗಪುರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ 102 ವೃಷಭಾವತಿನಗರದಲ್ಲಿ ಉಲ್ಲೇಖ ಪತ್ರದನ್ವಯ ದಿನಾಂಕ-18.01.2022 ಮಂಗಳವಾರದಂದು ಬೆಳಿಗ್ಗೆ-10.00 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಮೇಲ್ಕಂಡ ವಿಳಾಸದ ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸದರಿ ಸಭೆಗೆ ವಾರ್ಡ್‌ಗೆ ಸಂಬಂಧಿಸುವ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸ್ಥಳೀಯ ನಾಗರೀಕಾ ಕಲ್ಯಾಣ ಸಂಘಗಳ ಪ್ರತಿನಿಧಿಗಳು ಸಕಾಲದಲ್ಲಿ ಸಭೆಗೆ ತಪ್ಪದೇ ಹಾಜರಾಗಿ ವಾರ್ಡ್ ಅಭಿವೃದ್ಧಿ ಹಾಗೂ ಕುಂದು ಕೊರತೆಗಳ ಬಗ್ಗೆ ಮುಕ್ತವಾಗಿ ಚರ್ಚಿಸಿ ಅಮೂಲ್ಯ ಸಲಹೆ ಹಾಗೂ ಸೂಚನೆಗಳನ್ನು ನೀಡಲು ಹಾಗೂ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಿದೆ.

ಸಭೆಯಲ್ಲಿ ಚರ್ಚಿಸಬಹುದಾದ ವಿಷಯಗಳು:- 1)ಕೋವಿಡ್-19 ಸಾಂಕ್ರಾಮಿಕ ರೋಗ ಹರಡದಂತೆ ಮುಂಜಾಗ್ರತ ಕ್ರಮ ಕೈಗೊಳ್ಳುವ ಬಗ್ಗೆ. 2) ವಿಪತ್ತು ನಿರ್ವಹಣೆ ಬಗ್ಗೆ. 3) ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ. 4) ವಾರ್ಡ್ ಕುಂದು ಕೊರತೆಗಳ ಬಗ್ಗೆ. 5) ಇತರೆ ವಿಷಯಗಳ ಬಗ್ಗೆ.

ಕಾರ್ಯದರ್ಶಿ ಹಾಗೂ ಸಂಚಾಲಕರು
ವಾರ್ಡ್ ಸಮಿತಿ
ವಾರ್ಡ್ ಸಂಖ್ಯೆ-102

ಪ್ರತಿಯನ್ನು :-

1. ಕೌನ್ಸಿಲ್ ಕಾರ್ಯದರ್ಶಿಗಳು, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
2. ನೋಡಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-102 ವೃಷಭಾವತಿನಗರ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಅಧೀಕ್ಷಕರು (ತೋಟಗಾರಿಕೆ ಇಲಾಖೆ/ ಅರಣ್ಯ ಇಲಾಖೆ) ಪಶ್ಚಿಮ ವಲಯ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಮಲಪು ವಿಭಾಗ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ, ಪಶ್ಚಿಮ ವಲಯ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ನಾ.ಪು.) ಉಪವಿಭಾಗ/(ಘನತ್ಯಾಜ್ಯ ನಿರ್ವಹಣೆ ವಿಭಾಗ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
7. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
8. ಬೆಸ್ಕಾಂ ಎನ್.3/ ಎನ್.6 ಉಪ ವಿಭಾಗ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
9. ಆರೋಗ್ಯಾಧಿಕಾರಿ (ಪಶ್ಚಿಮ)/ಹಿರಿಯ ಆರೋಗ್ಯ ಪರಿವೀಕ್ಷರು(ನಾಗಪುರ ಉಪವಿಭಾಗ /ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-102 ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು/ ಸಹಾಯಕ ಕಂದಾಯ ಅಧಿಕಾರಿಗಳು (ನಾಗಪುರ)/ ಕಂದಾಯ ಪರಿವೀಕ್ಷಕರು ವಾರ್ಡ್-102 ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
11. ಠಾಣಾಧಿಕಾರಿಗಳು, ಬಸವೇಶ್ವರನಗರ /ಕಾಮಾಕ್ಷಿಪಾಳ್ಯ ಪೋಲೀಸ್ ಠಾಣೆ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
12. ಕಛೇರಿ ಪ್ರತಿ.

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್–102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು–79.

---

**ಸಂಖ್ಯೆ: ವಾ–102/ವಾ.ಸ./ಸಭಾನಡವಳಿ–32/2021–22** **ದಿನಾಂಕ:** 18/01/2022

### –:ಸಭೆಯ ನಡವಳಿಗಳು:–

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 18/01/2022 ಮಂಗಳವಾರ ಬೆಳಿಗ್ಗೆ 10.00 ಘಂಟೆಗೆ ವಾರ್ಡ್–102 ವೃಷಭಾವತಿನಗರ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ.ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:**

| | |
|---|---|
| 1 | ಶ್ರೀ ಕೆ. ವಿಜಯಶೇಖರ,<br>ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್– 102. |
| 2 | ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್ ಸಮಿತಿ ವಾ–102 ಹಾಗೂ ಸಹಾಯಕ ಅಭಿಯಂತರರು, ವಾರ್ಡ್–102. |
| 3 | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102. |
| 4 | ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102. |
| 5 | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 6 | ಪಿ.ಎಸ್.ಐ., ಬಸವೇಶ್ವರನಗರ ಪೊಲೀಸ್ ಠಾಣೆ. |
| 7 | ಪಿ.ಎಸ್.ಐ, ಕಾಮಾಕ್ಷೀಪಾಳ್ಯ ಪೊಲೀಸ್ ಠಾಣೆ. |
| 8 | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 9 | ಶ್ರೀ ಹೇಮಂತ್ ಕುಮಾರ್, ವಾರ್ಡ್ ಸಮಿತಿ ವಾರ್ಡ್–102. |
| 10 | ಶ್ರೀ ಗೌರಮ್ಮ, ವಾರ್ಡ್ ಸಮಿತಿ ವಾರ್ಡ್–102. |
| 11 | ಶ್ರೀ ರಾಜ್‌ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 12 | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 13 | ಶ್ರೀ ದೇವರಾಜು, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 14 | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. (ಕೊಳವೆ ಬಾವಿ ನಿರ್ವಹಣೆ) |



ಪು.ತಿ.ನೋ.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-102 ವೃಷಭಾವತಿನಗರದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸಭೆಯಲ್ಲಿ ಸೂಚಿಸಿದರು.
- ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಂದಿನಂತೆ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳುತ್ತಿದ್ದು, ಕಳೆದ 15 ದಿನಗಳಿಂದ ಇತ್ತೀಚಿನ ದಿನಗಳಲ್ಲಿ 151 ಸಂಖ್ಯೆ ಹೊಸ ಪ್ರಕರಣಗಳು ಕಂಡುಬಂದ್ದಿದ್ದು ಅದರಲ್ಲಿ 148 ಸಂಖ್ಯೆ ಕೋವಿಡ್ ಸೋಂಕಿತರನ್ನು ಹೋಮ್ ಐಸೋಲೇಷನ್ ಮಾಡಲಾಗಿರುತ್ತದೆ ಹಾಗೂ 3 ಸಂಖ್ಯೆ ಕೋವಿಡ್ ಸೋಂಕಿತರನ್ನು ಹಾಸ್ಪಿಟಾಲ್ಐಷೇಶ್‌ನ್ ಮಾಡಲಾಗಿರುತ್ತದೆ ಮತ್ತು ಯಾವುದೇ ಡೆತ್ ಕೇಸ್‌ಗಳು ಕಂಡುಬಂದಿರುವುದಿಲ್ಲ ಎಂದು ತಿಳಿಸಿದರು ಮುಂದುವರೆದು 15ವರ್ಷ ಮೇಲ್ಪಟವರಿಗೆ ವಾರ್ಡ್ ವ್ಯಾಪ್ತಿಯಲ್ಲಿರುವ ಖಾಸಗಿ ಹಾಗೂ ಸರ್ಕಾರಿ ಶಾಲೆಗಳಲ್ಲಿ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರ (ಕಾಮಾಕ್ಷೀಪಾಳ್ಯ)ದಲ್ಲಿ ವ್ಯಾಕ್ಸಿನೇಷನ್ ನೀಡುವ ಕಾರ್ಯಕ್ರಮವನ್ನು ಕೈಗೊಳ್ಳಲಾಗುತ್ತಿದೆ. 2ನೇ ಡೋಸ್ ತೆಗೆದುಕೊಂಡಿರುವಂತಹ 60ವರ್ಷ ಮೇಲ್ಪಟವರಿಗೆ Booster Dose ಅನ್ನು ನೀಡಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.

2) **ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-**

- ಶ್ರೀ ದೇವರಾಜ್, ಮತ್ತು ಶ್ರೀ ಹೇಮಂತ್ ಕುಮಾರ್ ಸದಸ್ಯರು ರವರು ಮಾತನಾಡುತ್ತಾ, ಎಂ.ಜಿ.ಓ.ಎಸ್ ಕಾಲೋನಿಯ 1ನೇ ಮುಖ್ಯರಸ್ತೆಯಲ್ಲಿ ಸ್ಯಾನಿಟರಿ ಪೈಪ್ ಲೈನ್ ದೂರಸ್ಥಿ ಮಾಡುವಂತೆ ಹಾಗು ಕುಡಿಯುವ ನೀರಿನ ಪೈಪ್ ಲೈನ್ ಮತ್ತು ವಾಲ್ವ್ ರಿಪೇರಿ ಮಾಡಿಸುವಂತೆ ಸಂಭಂದಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳಿಗೆ ಸೂಚಿಸಬೇಕೆಂದು ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ವಿಷಯವಾಗಿ ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ತಿಳಿಸಿದರು.
- ವಾರ್ಡ್ ಸಮಿತಿಯ ಎಲ್ಲಾ ಸದಸ್ಯರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಬೋರ್‌ವೆಲ್‌ಗಳು ಹಾಗು ಪ್ಯಾನಲ್ ಬೋರ್ಡ್‌ಗಳು ಹಾಳಾಗಿದ್ದು ಕೂಡಲೇ ಸದರಿ ಬೋರ್‌ವೆಲ್‌ಗಳನ್ನು ಹಾಗು ಪ್ಯಾನಲ್ ಬೋರ್ಡ್‌ಗಳನ್ನು ತುರ್ತಾಗಿ ದುರಸ್ಥಿ ಮಾಡುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಬೋರ್‌ವೆಲ್‌ಗಳನ್ನು ನಿರ್ವಹಣೆ ಮಾಡುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಕೊಳವೆ ಭಾವಿಗಳ ನಿರ್ವಹಣಾ ಅಧಿಕಾರಿಗಳಿಗೆ ಕೂಡಲೇ ಸೂಕ್ತ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಸೂಚಿಸಿದರು.

3) **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ವಾರ್ಡ್ ಸಮಿತಿಯ ಎಲ್ಲಾ ಸದಸ್ಯರು ಮಾತನಾಡುತ್ತಾ ವಾರ್ಡ್ ವ್ಯಾಪ್ತಿಯ ರಸ್ತೆ ಬದಿಗಳಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಸ್ವಚ್ಚತೆ ಕಾಪಾಡುವಂತೆ ಸಭೆಯಲ್ಲಿ ಕೋರಿದರು.
- ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ಶೀಘ್ರವಾಗಿ ಕ್ರಮಕೈಗೊಳ್ಳಲಾಗುವುದಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ಸಹ ಸ್ವಚ್ಚತೆ ಕಾಪಾಡಿಕೊಳ್ಳುವ ಬಗ್ಗೆ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಜವಬ್ದಾರಿಯಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

4) **ಪೊಲೀಸ್ ವಿಭಾಗದ ಬಗ್ಗೆ:-**

- ಎಲ್ಲಾ ವಾರ್ಡ್ ಸದಸ್ಯರು ಮಾತನಾಡುತ್ತಾ ವಾರ್ಡ್ ವ್ಯಾಪ್ತಿಯಲ್ಲಿ ಮಾದಕ ವ್ಯಸನಿಗಳು ಹಾಗು ಮದ್ಯ ವ್ಯಸನಿಗಳ ಹಾವಳಿ ಹೆಚ್ಚಾಗಿರುತ್ತದೆ ಅಂತಹ ಪ್ರಕರಣಗಳನ್ನು ಶೀರ್ಘವಾಗಿ ಬಗೆಹರಿಸುವಂತೆ ಸಭೆಯಲ್ಲಿ ಕೋರಿದರು.
- ಬಸವೇಶ್ವರನಗರ ಹಾಗು ಕಾಮಾಕ್ಷಿಪಾಳ್ಯ ಆರಕ್ಷಕ ಠಾಣೆ ವತಿಯಿಂದ ಸಭೆಯಲ್ಲಿ ಹಾಜರಿದ್ದ ಠಾಣಾಧಿಕಾರಿಗಳು ಮಾತನಾಡುತ್ತ ಈಗಾಗಲೇ ನಮ್ಮ ವ್ಯಾಪ್ತಿಯಲ್ಲಿ ಬರುವಂತಹ ಭಾಗಗಳಲ್ಲಿ ಹೊಯ್ಸಳ ವಾಹನ ಮತ್ತು ಚೇತಾ ವಾಹನಗಳಲ್ಲಿ ನಮ್ಮ ಸಿಬ್ಬಂದಿ ವರ್ಗದವರು ಗಸ್ತು ತಿರುಗುತ್ತಿದ್ದು ಇಂತಹ ಪ್ರಕರಣಗಳು ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.



ಮು.ತಿ.ನೋ.

➢ ಎಲ್ಲಾ ವಾರ್ಡ್ ಸದಸ್ಯರು ಮಾತನಾಡುತ್ತಾ ಕಾಮಾಕ್ಷಿಪಾಳ್ಯ ಆರಕ್ಷಕ ಠಾಣೆ ವತಿಯಿಂದ ಈ ಹಿಂದೆ ಪ್ರತಿ ತಿಂಗಳು ಅಥವ 3 ತಿಂಗಳಿಗೊಮ್ಮೆ ಜನಸ್ಪಂಧನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿತ್ತು ಸದರಿ ಸಭೆಯಲ್ಲಿ ಭಾಗವಹಿಸಲು ಸಭೆಗೆ ಆಹ್ವಾನ ನೀಡುತ್ತಿದ್ದರು. ಆದರೆ ಕಳೆದ ಒಂದು ವರ್ಷದಿಂದ ಯಾವುದೇ ಆಹ್ವಾನ ನೀಡಿರುವುದಿಲ್ಲ ಆದುದರಿಂದ ಮುಂದಿನ ದಿನಗಳಲ್ಲಿ ಜನಸ್ಪಂಧನ ಕಾರ್ಯಕ್ರಮವನ್ನು ಆಯೋಜಿಸಲು ಹಾಗು ಸಭೆಗೆ ಆಹ್ವಾನ ನೀಡುವಂತೆ ಸಂಭಂದಪಟ್ಟವರಿಗೆ ಸೂಚಿಸಬೇಕೆಂದು ಸಭೆಯಲ್ಲಿ ಕೋರಿದರು.

➢ ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಸದರಿ ವಿಷಯವಾಗಿ ಶೀಘ್ರವಾಗಿ ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಕಾಮಾಕ್ಷಿಪಾಳ್ಯ ಆರಕ್ಷಕ ಠಾಣಾಧಿಕಾರಿಗಳಿಗೆ ಸಭೆಯಲ್ಲಿ ತಿಳಿಸಿದರು.

5) <u>ಬೀದಿ ದೀಪ ನಿರ್ವಹಣೆ ಬಗ್ಗೆ:-</u>

➢ ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ದೂರುಗಳಿದ್ದಲ್ಲಿ ಸಭೆಯಲ್ಲಿ ತಿಳಿಸುವಂತೆ ಸೂಚಿಸಿದರು.

➢ ವಾರ್ಡ್ ಸಮಿತಿಯ ಎಲ್ಲಾ ಸದಸ್ಯರು ಮಾತನಾಡುತ್ತಾ ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆಯ ಕಾರ್ಯವು ತೃಪ್ತಿದಾಯಕವಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

6) <u>ಬೆಸ್ಕಾಂ ವಿಭಾಗದ ಬಗ್ಗೆ:-</u>

➢ ವಾರ್ಡ್ ಸಮಿತಿಯ ಎಲ್ಲಾ ಸದಸ್ಯರು ಮಾತನಾಡುತ್ತಾ ವಾರ್ಡ್ ವ್ಯಾಪ್ತಿಯ ಹಲವಾರು ಭಾಗಗಳಲ್ಲಿ ಯುಜಿ ಕೇಬಲ್ ಅಳವಡಿಸುವ ಕಾಮಗಾರಿಯು ಬೆಸ್ಕಾಂ ವತಿಯಿಂದ ಕೈಗೊಳಲಾಗುತ್ತಿದ್ದು ಇದರಿಂದ ರಸ್ತೆಗಳಲ್ಲಿ ಗುಂಡಿಗಳು ನಿರ್ಮಾಣವಾಗಿದ್ದು ಸಾರ್ವಜನಿಕರು ಹಾಗು ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದ್ದು ಇದನ್ನು ಕುಡಲೇ ದುರಸ್ತಿಗೊಳಿಸುವಂತೆ ಸಭೆಯಲ್ಲಿ ಕೋರಿದರು.

➢ ಶ್ರೀ. ಪ್ರಕಾಶ್ ಕಾರ್ಯದರ್ಶಿಗಳು ಕೂಡಲೇ ಶ್ರೀ ಶಂಕರ್ ರಾಜ್ ಹಾಗು ಶ್ರೀ. ಅನಂತ್ ಕುಮಾರ್ ಸಹಾಯಕ ಅಭಿಯಂತರರು ಬೆಸ್ಕಾಂರವರಿಗೆ ದೂರವಾಣಿ ಮೂಖೇನ ಸದರಿ ದೂರಿನ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ **ವಾರ್ಡ್ ಕಮಿಟಿ ವಾರ್ಡ್-102 ವಾಟ್ಸ್ ಆಪ್ ಗ್ರೂಪ್** ನಲ್ಲಿ ಮತ್ತು ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,

24/2/2022
ನೋಡೆಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್-102

<u>ಪ್ರತಿಯನ್ನು</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.



ಮು.ತಿ.ನೋ.

6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ವಾ-102 ವೃಷಭಾವತಿನಗರ

ದಿನಾಂಕ: 18/1/2022 ಸಮಯ: 10.00 ಘಂಟೆಗೆ.

ಮೇಲ್ಕಂಡ ದಿನಾಂಕದಂದು ಬೆಳಿಗ್ಗೆ ಕಚೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು. ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಮತ್ತು RWA's ಸದಸ್ಯರುಗಳ ವಿವರ

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ. |
|---|---|---|---|---|
| 1 | ಕೆ. ವಿಜಯಕುಮಾರ್. | ನೋಡಲ್ ಅಧಿಕಾರಿ | 9448670084 | [signature] 18/1/2022 |
| 2 | ಎ. ಪ್ರಕಾಶ್ | ಸಹಾಯಕ ಅಭಿಯಂತರ W-102 A.E | 9480688102 | [signature] 18/1/2022 |
| 3 | ಮಹದೇವಯ್ಯ (ಆ) | ಆರೋಗ್ಯ ನಿರೀಕ್ಷಕರು | 9731167500 | [signature] |
| 4 | prema | [illegible] Bathelanur. | 9632728915 | Prema |
| 5 | Ranganath.c | Ward committee secretary | 9341199998 | [signature] C. |
| 6 | ಶ್ರೀನಿವಾಸಮೂರ್ತಿ ASI | ಜ್ಞಾನಭಾರತಿ P.S. | 9742566691 | [signature] |
| 7 | Dinesh. K.H | W. inspector. | 9945421088 | [signature] |
| 8 | K.Gowri | Bathelanur | 9740249333 | K.Gowri |
| 9 | ವಿದ್ಯಾ ಕಣಕಟ್ಟೆ | Ward Committee | 9902399781 | ವಿದ್ಯಾ ಕಣಕಟ್ಟೆ |
| 10 | Chandrappa | MEMbatra | 9845763281 | [signature] |
| 11 | ರಾಜ್ ಕುಮಾರ್ | ಮಾರ್ಷಲ್ | 8553779344 | Rajk |
| 12 | Ranjith kumar sg | marshal | 9066830330 | Ranjith |
| 13 | ಶಿವರಾಜು | ಪತ್ರಕರ್ತ | 9632584986. | [signature] |

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 14 | S.BABU | JHI102 | 9632544664 | S.Babu |
| 15 | G.R.Govindaraju | SHI 102 | 9845512187 | [illegible] |
| 16 | Hemanthkumar | [illegible] | 9448362208 | [illegible] |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |
| | | | | |